ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 180
ಸದಸ್ಯರ ಹೆಸರು : ಶ್ರೀ ಪಿ.ಆರ್.ರಮೇಶ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 01.02.2021
ಉತ್ತರಿಸುವವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ಅರಣ್ಯ ಪ್ರದೇಶದ ಸಮೀಕ್ಷೆ ಮತ್ತು ಗಡಿ ಪುನರ್ ಗುರುತಿಸುವ ಕಾರ್ಯವನ್ನು ನಡೆಸಲಾಗಿದೆಯೇ; ನಡೆಸಿದ್ದಲ್ಲಿ ಯಾವ ಯಾವ ವರ್ಷಗಳಲ್ಲಿ ನಡೆಸಲಾಗಿದೆ; (ವಿವರ ನೀಡುವುದು)	ರಾಜ್ಯದಲ್ಲಿರುವ ಅರಣ್ಯ ಪ್ರದೇಶದ ಸಮೀಕ್ಷೆ ಮತ್ತು ಗಡಿ ಪುನರ್ ಗುರುತಿಸುವ ಕಾರ್ಯವನ್ನು ನಡೆಸಲಾಗಿರುತ್ತದೆ. ವಿವರಗಳನ್ನು **<u>ಅನುಬಂಧ-1</u>** ರಲ್ಲಿ ಒದಗಿಸಿದೆ.
ಆ)	ಅರಣ್ಯ ಪ್ರದೇಶದ ಮಾಹಿತಿಯನ್ನು ಸಮರ್ಕವಾಗಿ ನಿಗಾ ಇಡಲು ಮತ್ತು ರಕ್ಷಿಸಲು ಭೌಗೋಳಿಕ ಮಾಹಿತಿ ವ್ಯವಸ್ಥೆ (ಜಿಐಎಸ್) ಅಥವಾ ಇನ್ನಿತರೆ ಆಧುನಿಕ ತಂತ್ರಜ್ಞಾನವನ್ನು ರಾಜ್ಯ ಸರ್ಕಾರದಿಂದ ಉಪಯೋಗಿಸಲಾಗುತ್ತಿದೆಯೇ; (ವಿವರ ನೀಡುವುದು)	ಕರ್ನಾಟಕ ಅರಣ್ಯ ಇಲಾಖೆಯು ಭೌಗೋಳಿಕ ಮಾಹಿತಿ ವ್ಯವಸ್ಥೆ (ಜಿಐಎಸ್) ತಂತ್ರಜ್ಞಾನ, ದೂರ ಸಂವೇದಿ ತಂತ್ರಜ್ಞಾನ, ಇತ್ಯಾದಿ ಆಧುನಿಕ ತಂತ್ರಜ್ಞಾನಗಳನ್ನು ಉಪಯೋಗಿಸಿಕೊಂಡು ರಾಜ್ಯದ ಅರಣ್ಯ ಗಡಿಗಳ, ನಕ್ಷೆ, ಅಧಿಸೂಚನೆ ಇತ್ಯಾದಿಗಳ ಇಂಡೀಕರಣ, ಕಡೆಸ್ಟ್ರಲ್ ಮಟ್ಟದಲ್ಲಿ ಅರಣ್ಯ ಗಡಿಗಳ ಡಿಜಿಟೈಸೇಷನ್ (Digitization of Notified forest boundaries) ಕಾರ್ಯವನ್ನು ಕೈಗೊಂಡಿರುತ್ತದೆ. ಇದಲ್ಲದೇ, ಸದರಿ ತಂತ್ರಜ್ಞಾನವನ್ನು ಬಳಸಿಕೊಂಡು ಅರಣ್ಯ ಹೊದಿಕೆಗಳ ಬದಲಾವಣೆ, ಕಾಡ್ಗಿಚ್ಚು ಮಾಹಿತಿ ಮತ್ತು ನಿಯಂತ್ರಣ, ಅರಣ್ಯ ಹೊದಿಕೆಯ ಮ್ಯಾಪಿಂಗ್ ಕಾರ್ಯ, ಇತ್ಯಾದಿಗಳನ್ನು ನಿರಂತರವಾಗಿ ನಿರ್ವಹಿಸುತ್ತಿರುತ್ತದೆ ಮತ್ತು ಇವುಗಳ ವಿಶ್ಲೇಷಣೆಗಾಗಿ ಸಂಯುಕ್ತ ಜಿ.ಐ.ಎಸ್ ವೆಬ್‌ತಾಣವನ್ನು ಅಭಿವೃದ್ಧಿ ಪಡಿಸಿರುತ್ತದೆ. ಸದರಿ ಕಾರ್ಯಗಳನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕಾ ಕೇಂದ್ರದ ಸಹಯೋಗದೊಂದಿಗೆ ನಿರ್ವಹಿಸಲಾಗುತ್ತಿರುತ್ತದೆ.
ಇ)	ಅರಣ್ಯ ಪ್ರದೇಶಗಳಲ್ಲಿ ಅತಿಕ್ರಮಣಗಳನ್ನು ಸಂಪೂರ್ಣವಾಗಿ ತಡೆಗಟ್ಟಲು; ಒತ್ತುವರಿ ಸಮಸ್ಯೆ ಇರುವ ಪ್ರದೇಶಗಳಲ್ಲಿ ಗುಂಡಿ ತೋಡುವ ಮತ್ತು ಬೇಲಿಗಳನ್ನು ಹಾಕುವ ಕೆಲಸಗಳನ್ನು ಸರ್ಕಾರದಿಂದ ಮಾಡಲಾಗಿದೆಯೇ; ಅಥವಾ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)	ಹೌದು. ಅರಣ್ಯ ಪ್ರದೇಶಗಳಲ್ಲಿ ಅತಿಕ್ರಮಣಗಳನ್ನು <u>ತಡೆಗಟ್ಟಲು ಜಾನುವಾರು ನಿರೋಧಕ ಕಂದಕ, ಚೈನ್ ಲಿಂಕ್</u> ಮೆಶ್ ನಗರ ಪ್ರದೇಶಗಳ ಕಾಡಿನ ಅಂಚಿನ ಭಾಗಗಳಲ್ಲಿ ಕಾಂಪೌಂಡ್‌ವಾಲ್‌ಗಳ ಕಾಮಗಾರಿಗಳನ್ನು ಕೈಗೊಂಡು ಅರಣ್ಯ ಪ್ರದೇಶವನ್ನು ರಕ್ಷಿಸಲಾಗಿರುತ್ತದೆ.

ಈ)	ಸಂರಕ್ಷಿತ ಅರಣ್ಯ ಪ್ರದೇಶಗಳಲ್ಲಿ (Reserved Forest) ಕಾಡ್ಗಿಚ್ಚು ಹರಡದಂತೆ ತಡೆಯಲು ಸರ್ಕಾರದಿಂದ ಯಾವ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲಾಗುತ್ತಿದೆ: (ವಿವರ ನೀಡುವುದು)	ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ರಾಜ್ಯದಲ್ಲಿ ಕಾಡ್ಗಿಚ್ಚನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಈ ಕೆಳಕಂಡಂತೆ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 1. ಅರಣ್ಯ ಪ್ರದೇಶದಲ್ಲಿ ಹೊಸದಾಗಿ ಬೆಂಕಿ ರೇಖೆಗಳ ನಿರ್ಮಾಣ, ಹಳೆಯ ಬೆಂಕಿ ರೇಖೆಗಳನ್ನು ಹಾಗೂ ಡಿ ಲೈನ್‌ಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. ಇದರಿಂದಾಗಿ ಕಾಡ್ಗಿಚ್ಚಿನಿಂದ ಸಂಭವಿಸಬಹುದಾದ ಹಾನಿಯು ಬಹುತೇಕ ಕಡಿಮೆಯಾಗುತ್ತದೆ. 2. ಅರಣ್ಯ ಇಲಾಖೆಯಲ್ಲಿ ಶುಲ್ಕ ರಹಿತ ಅರಣ್ಯ ಸಹಾಯವಾಣಿ **1926** ದಿನದ 24 ಗಂಟೆಯು ಕಾರ್ಯನಿರತವಾಗಿದ್ದು ಸಾರ್ವಜನಿಕರಿಂದ ಅರಣ್ಯ ಬೆಂಕಿ ಪ್ರಕರಣಗಳ ಬಗ್ಗೆ ಮಾಹಿತಿ ಸ್ವೀಕೃತವಾದಲ್ಲಿ ಸಂಬಂಧಿಸಿದ ಕ್ಷೇತ್ರಾಧಿಕಾರಿಗಳಿಗೆ ಮಾಹಿತಿಯನ್ನು ಸಕಾಲದಲ್ಲಿ ರವಾನಿಸಿ ಅರಣ್ಯ ಬೆಂಕಿಯನ್ನು ನಿಯಂತ್ರಿಸುವಲ್ಲಿ ತುರ್ತ ಕ್ರಮ ಕೈಗೊಳ್ಳಲಾಗುತ್ತದೆ. 3. ಅರಣ್ಯ ಬೆಂಕಿಯನ್ನು ನಂದಿಸಲು ಇಲಾಖಾ ಸಿಬ್ಬಂದಿಯೊಂದಿಗೆ ಸ್ಥಳೀಯ ಗ್ರಾಮಸ್ಥರು ಹಾಗೂ ಬುಡಕಟ್ಟು ಜನಾಂಗದವರನ್ನು ಒಳಗೊಂಡಂತೆ ತಂಡಗಳನ್ನು ರಚಿಸಲಾಗಿರುತ್ತದೆ. 4. ಅರಣ್ಯ ಬೆಂಕಿಗಳನ್ನು ನಿಯಂತ್ರಿಸಲು ಆಧುನಿಕ ಉಪಕರಣಗಳನ್ನು, ಶಿರಸ್ತ್ರಾಣ, ಸಮವಸ್ತ್ರಗಳನ್ನು ಬೆಂಕಿ ಕಾವಲುಗಾರರಿಗೆ ಹಾಗೂ ಬೆಂಕಿ ಸಂರಕ್ಷಣಾ ಪಡೆಗಳಿಗೆ ಒದಗಿಸಲಾಗಿರುತ್ತದೆ. ಅವಶ್ಯವಿದ್ದ ಸಂದರ್ಭಗಳಲ್ಲಿ ಅಗ್ನಿಶಾಮಕದಳದ ನೆರವನ್ನು ಸಹ ಪಡೆದುಕೊಂಡು ಅರಣ್ಯ ಬೆಂಕಿಗಳನ್ನು ಸಮರ್ಪಕವಾಗಿ ನಿಯಂತ್ರಿಸಿ ಶಮನಗೊಳಿಸಲಾಗುತ್ತದೆ.
ಉ)	ಇತ್ತೀಚೆಗೆ ಅರಣ್ಯ ಪ್ರದೇಶದಿಂದ ಕಾಡು ಪ್ರಾಣಿಗಳು ಆಹಾರಕ್ಕಾಗಿ ಮತ್ತು ಇನ್ನಿತರೆ ಕಾರಣಗಳಿಂದ ನಗರ/ಪಟ್ಟಣದ ವಸತಿ ಪ್ರದೇಶಗಳಿಗೆ ಬರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು? (ವಿವರ ನೀಡುವುದು)	ಬಂದಿದೆ. ವನ್ಯಪ್ರಾಣಿಗಳು ನಗರ / ಪಟ್ಟಣದ ವಸತಿ ಪ್ರದೇಶಗಳಿಗೆ ಬರುವುದನ್ನು ತಡೆಯಲು ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. 1. ರಾಜ್ಯದಲ್ಲಿರುವ ವನ್ಯಜೀವಿಗಳಿಗೆ ಸಂಪೂರ್ಣ ರಕ್ಷಣೆ ನೀಡುವ ಸಲುವಾಗಿ ರಾಷ್ಟ್ರೀಯ ಉದ್ಯಾನವನ, ಅಭಯಾರಣ್ಯ, ಹುಲಿ ಮೀಸಲು ಅರಣ್ಯ, ಸಂರಕ್ಷಿತ ಮೀಸಲು ಅರಣ್ಯಗಳನ್ನು ಘೋಷಿಸಲಾಗಿರುತ್ತದೆ. 2. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ.

...3...

3. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಚ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.
4. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.
5. ಕಳ್ಳಬೇಟೆ ತಡೆ ಶಿಬಿರಗಳಿಗೆ ಹಾಗೂ Rapid Response Teams (RRT) ಗಳನ್ನು ಅಂದರೆ ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಹಾಗೂ Wireless networking ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
6. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
7. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣ ಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮವಹಿಸಲಾಗುತ್ತಿದೆ.
8. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.
9. ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ಇ-ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಆದ್ಯತೆ ಮೇರೆಗೆ ಸರ್ಕಾರದ ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ನೇರವಾಗಿ ಸಂತ್ರಸ್ಥರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು **ಇ-ಪರಿಹಾರ ತಂತ್ರಾಂಶದ** ಮೂಲಕ ನಿರ್ವಹಿಸಲಾಗುತ್ತಿದೆ.

ಸಂಖ್ಯೆ: ಅಪಜೀ 05 ಎಫ್‌ಎಎಫ್ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

ಅನುಬಂಧ-1

ಅರಣ್ಯ ಪ್ರದೇಶದ ಸಮೀಕ್ಷೆ ಮತ್ತು ಗಡಿ ಪುನರ್ ಗುರುತಿಸುವ ಕಾರ್ಯದ ವಿವರ

ಕ್ರಮ ಸಂಖ್ಯೆ	ವರ್ಷ	ಯೋಜಣೆ ಮಾಡಿದ ಪರಿಮಾಣ . (ಕಿ.ಮೀ.ಗಳಲ್ಲಿ)	ಖರ್ಚು ಮಾಡಿದ ಮೊತ್ತ (ರೂ. ಲಕ್ಷಗಳಲ್ಲಿ)
1	2010-11	1998.05	430.30
2	2011-12	1066.50	410.21
3	2012-13	2442.80	622.02
4	2013-14	3274.85	674.26
5	2014-15	2210.56	793.50
6	2015-16	1412.82	605.59
7	2016-17	3129.16	1778.76
8	2017-18	3805.77	2376.54
9	2018-19	5382.53	4412.09
10	2019-20	4383.36	2482.67
ಒಟ್ಟು		**29106.40**	**14585.94**